# ಕೈಗಾರಿಕಾ ಮತ್ತು ವೃತ್ತಿ ಕೌಶಲ್ಯಗಳ ಕಾರ್ಯಕ್ರಮ ಯಶಸ್ವಿ



**ಶುಭೋದಯ ವಾರ್ತೆ: (ಸೆ.27) ಹಳಿಯಾಳ:** ವಿದ್ಯಾರ್ಥಿಗಳ ಚಿಂತನೆಗಳು ಪಠ್ಯಕ್ರಮಗಳಿಗಷ್ಟೇ ಸೀಮಿತವಾಗಿರದೆ ಕೈಗಾರಿಕಾ ವಲಯದಲ್ಲಿನ ತಾಂತ್ರಿಕ ಸಮಸ್ಯೆಗಳಿಗೆ ಪರಿಹಾರ ಒದಗಿಸುವಂತಿರಬೇಕು ಎಂದು ಗುರುರಾಜ ದೇಶಪಾಂಡೆ ಹೇಳಿದರು. ಪಟ್ಟಣದ ಕೆ ಎಲ್ ಎಸ್ ವಿ ಡಿ ಐ ಟಿ ಹಳಿಯಾಳದ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ ವಿಭಾಗ ವಿದ್ಯಾರ್ಥಿಗಳಿಗೆ ಕೈಗಾರಿಕಾ ವಲಯ ಬಯಸುವ ಕೌಶಲ್ಯಗಳ ಕುರಿತಾಗಿ ಅರಿವು ಮೂಡಿಸುವ ಕಾರ್ಯಕ್ರಮವನ್ನು ಸಪ್ಟೆಂಬರ್ 25ರಂದು ಆಯೋಜಿಸಲಾಗಿತ್ತು. ಈ ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಯಾಗಿ ಹಳಿಯಾಳದ ಇ ಐ ಡಿ ಸಕ್ಕರೆ ಕಾರ್ಖಾನೆಯ ಹಿರಿಯ ಅಧಿಕಾರಿ ಗುರುರಾಜ ದೇಶಪಾಂಡೆ ಆಗಮಿಸಿದ್ದರು. ಕೈಗಾರಿಕಾ ವಲಯವು ಬಯಸುವ ಕೌಶಲ್ಯಗಳನ್ನು ವಿದ್ಯಾರ್ಥಿಗಳು ಅಗತ್ಯವಾಗಿ ಹೊಂದಿದರೆ, ಭವಿಷ್ಯದಲ್ಲಿ ಉತ್ತಮ ಉದ್ಯೋಗಾವಕಾಶಗಳನ್ನು ಗಳಿಸಿಕೊಳ್ಳಲು ಸಪಕಾರಿಯಾಗುವುದೆಂದು ಹೇಳಿದರು. ಕೈಗಾರಿಕಾ ಕ್ಷೇತ್ರದಲ್ಲಿನ ಪ್ರಕ್ರಿಯೆ ದಕ್ಷತೆಯನ್ನು ಹೆಚ್ಚಿಸಲು ಕೈಗೊಳ್ಳುತ್ತಿರುವ ನೂತನ ತಂತ್ರಜ್ಞಾನಗಳ ಕುರಿತಾಗಿ ತಿಳಿಸುತ್ತ, ಎಲೆಕ್ಟ್ರಿಕಲ್ ವಿದ್ಯಾರ್ಥಿಗಳಿಗೆ ಪವರ್ ಫ್ಯಾಕ್ಟರ್ ಸುಧಾರಣೆ. ಅನಗತ್ಯವಾಗಿ ಶಕ್ತಿಯು ಪೋಲಾಗದಂತೆ ತಡೆಯಲು ಇರುವ ತಂತ್ರಜ್ಞಾನಗಳ ಕುರಿತಾಗಿ ಮಾಹಿತಿ ನೀಡಿದರು. ನೂತನ ತಂತ್ರಜ್ಞಾನಗಳಾದ ಪಿ ಎಲ್ ಸಿ ಮತ್ತು ಸ್ಕ್ಯಾಡಾ ವನ್ನು ಸಮರ್ಪಕವಾಗಿ ಬಳಸಿಕೊಳ್ಳಲಾಗುತ್ತಿರುವುದರ ಕುರಿತಾಗಿ ವಿವರಿಸಿದರು. ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಿಕನಿಕ್ಸ್ ವಿಭಾಗ ಮುಖ್ಯಸ್ಥೆ ಪ್ರೊ. ರಾಜೇಶ್ವರಿ ಎನ್ ಕಾರ್ಯಕ್ರಮ ಆಯೋಜಿಸಿದ್ದರು. ಪ್ರೊ. ರವೀಂದ್ರ ಮೋಟೆಕರ್ ಸಂಯೋಜಿಸಿದ್ದರು. ಐವತ್ತಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಅಚಲ ಆತ್ಮವಿಶ್ವಾಸ ಹಾಗೂ ಸತತ ಪರಿಶ್ರಮದಿಂದ ಉಜ್ವಲ ಭವಿಷ್ಯ ರೂಪಿಸಿಕೊಳ್ಳುವಂತೆ ಲೋಕೇಶ್ ಮಾಥುರ್ ವಿದ್ಯಾರ್ಥಿಗಳಿಗೆ ಹೇಳಿದರು. ಪಟ್ಟಣದ ಕೆ ಎಲ್ ಎಸ್ ವಿ ಡಿ ಐ ಟಿ ಹಳಿಯಾಳದಲ್ಲಿ ಸಪ್ಟೆಂಬರ್ 26ರಂದು ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಮಾರ್ಗದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಸಂಪನ್ಮೂಲ ವ್ಯಕ್ತಿಯಾಗಿ ಈ ಕಾರ್ಯಕ್ರಮಕ್ಕೆ ಝೂಡ್ ಸ್ಕಿಲ್ ಅಪ್ ಸಂಸ್ಥೆಯ ಸಂಸ್ಥಾಪಕ ಲೋಕೇಶ್ ಮಾತುರ್ ಆಗಮಿಸಿದ್ದರು. ವಿದ್ಯಾರ್ಥಿಗಳು ಶಿಸ್ತು ಬದ್ಧ ಜೀವನವನ್ನು ರೂಪಿಸಿಕೊಳ್ಳುವುದು ಅತ್ಯಗತ್ಯವಾಗಿದ್ದು, ಪರಿಶ್ರಮ ಮನೋಭಾವದಿಂದ ಗುರಿ ಸಾಧಿಸಬೇಕೆಂದು ಹೇಳಿದರು. ತಮ್ಮ ಸಾಮರ್ಥ್ಯದ ಮೇಲೆ ನಂಬಿಕೆ ಇಟ್ಟು, ಗುರಿ ಸಾಧನೆಗೆ ಅಗತ್ಯವಿರುವ ಕೌಶಲ್ಯಗಳನ್ನು ಹೊಂದಬೇಕೆಂದು. ಉತ್ತಮ ಭವಿಷ್ಯ ರೂಪಿಸಲು ಸಹಕಾರಿಯಾಗಿರುವ ತಂದೆ ತಾಯಿಯರನ್ನು ಕಡೆಗಾಣಿಸದಂತೆ ಕಿವಿಮಾತು ಹೇಳಿದರು. ಕೇವಲ ಯಶಸ್ಸಿನ ಕನಸು ಕಾಣುವುದು ಬಿಟ್ಟು, ಕಾರ್ಯ ಸಾಧನೆಗೆ ಸಿದ್ಧತೆ ಮಾಡಿಕೊಳ್ಳಬೇಕೆಂದು ಹೇಳಿದರು. ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ಸಂಚಾಲಕ ಪ್ರೊ. ಸುಧೀರ್ ಕುಲಕರ್ಣಿ ನಿರೂಪಿಸಿದರು. ಪ್ರೊ. ನವೀನ್ ಹಿರೇಮಠ ಸಂಯೋಜಿಸಿದ್ದರು. ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ವತಿಯಿಂದ ಆಯೋಜಿಸಲಾಗಿದ್ದ ಈ ಕಾರ್ಯಕ್ರಮದಲ್ಲಿ 180ಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರೆಂದು ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೈಗಾರಿಕಾ ಮತ್ತು ವೃತ್ತಿ ಕೌಶಲ್ಯಗಳ ಕಾರ್ಯಕ್ರಮ ಯಶಸ್ವಿ



ಹಳಿಯಾಳ: ವಿದ್ಯಾರ್ಥಿಗಳ ಚಿಂತನೆಗಳು ಪಠ್ಯಕ್ರಮಗಳಿಗಷ್ಟೇ ಸೀಮಿತವಾಗಿರದೆ ಕೈಗಾರಿಕಾ ವಲಯದಲ್ಲಿನ ತಾಂತ್ರಿಕ ಸಮಸ್ಯೆಗಳಿಗೆ ಪರಿಹಾರ ಒದಗಿಸುವಂತಿರಬೇಕು ಎಂದು ಗುರುರಾಜ ದೇಶಪಾಂಡೆ ಹೇಳಿದರು. ಪಟ್ಟಣದ ಕೆ ಎಲ್ ಎಸ್ ವಿ ಡಿ ಐ ಟಿ ಹಳಿಯಾಳದ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ ವಿಭಾಗ ವಿದ್ಯಾರ್ಥಿಗಳಿಗೆ ಕೈಗಾರಿಕಾ ವಲಯ ಬಯಸುವ ಕೌಶಲ್ಯಗಳ ಕುರಿತಾಗಿ ಅರಿವು ಮೂಡಿಸುವ ಕಾರ್ಯಕ್ರಮವನ್ನು ಸಪ್ಟೆಂಬರ್ 25ರಂದು ಆಯೋಜಿಸಲಾಗಿತ್ತು. ಈ ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಯಾಗಿ ಹಳಿಯಾಳದ ಇ ಐ ಡಿ ಸಕ್ಕರೆ ಕಾರ್ಖಾನೆಯ ಹಿರಿಯ ಅಧಿಕಾರಿ ಗುರುರಾಜ ದೇಶಪಾಂಡೆ ಆಗಮಿಸಿದ್ದರು. ಕೈಗಾರಿಕಾ ವಲಯವು ಬಯಸುವ ಕೌಶಲ್ಯಗಳನ್ನು ವಿದ್ಯಾರ್ಥಿಗಳು ಅಗತ್ಯವಾಗಿ ಹೊಂದಿದರೆ, ಭವಿಷ್ಯದಲ್ಲಿ ಉತ್ತಮ ಉದ್ಯೋಗಾವಕಾಶಗಳನ್ನು ಗಳಿಸಿಕೊಳ್ಳಲು ಸಹಕಾರಿಯಾಗುವುದೆಂದು ಹೇಳಿದರು. ಕೈಗಾರಿಕಾ ಕ್ಷೇತ್ರದಲ್ಲಿನ ಪ್ರಕ್ರಿಯೆ ದಕ್ಷತೆಯನ್ನು ಹೆಚ್ಚಿಸಲು ಕೈಗೊಳ್ಳುತ್ತಿರುವ ನೂತನ ತಂತ್ರಜ್ಞಾನಗಳ ಕುರಿತಾಗಿ ತಿಳಿಸುತ್ತ, ಎಲೆಕ್ಟ್ರಿಕಲ್ ವಿದ್ಯಾರ್ಥಿಗಳಿಗೆ ಪವರ್ ಫ್ಯಾಕ್ಟರ್ ಸುಧಾರಣೆ, ಅನಗತ್ಯವಾಗಿ ಶಕ್ತಿಯು ಪೋಲಾಗದಂತೆ ತಡೆಯಲು ಇರುವ ತಂತ್ರಜ್ಞಾನಗಳ ಕುರಿತಾಗಿ ಮಾಹಿತಿ ನೀಡಿದರು. ನೂತನ ತಂತ್ರಜ್ಞಾನಗಳಾದ ಪಿ ಎಲ್ ಸಿ ಮತ್ತು ಸ್ಕ್ಯಾಡಾ ವನ್ನು ಸಮರ್ಪಕವಾಗಿ ಬಳಸಿಕೊಳ್ಳಲಾಗುತ್ತಿರುವುದರ ಕುರಿತಾಗಿ ವಿವರಿಸಿದರು. ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಿಕನಿಕ್ಸ್ ವಿಭಾಗ ಮುಖ್ಯಸ್ಥೆ ಪ್ರೊ, ರಾಜೇಶ್ವರಿ ಎನ್ ಕಾರ್ಯಕ್ರಮ ಆಯೋಜಿಸಿದ್ದರು. ಪ್ರೊ, ರವೀಂದ್ರ ಮೋಟೆಕರ್ ಸಂಯೋಜಿಸಿದ್ದರು. ಐವತ್ತಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಅಚಲ ಆತ್ಮವಿಶ್ವಾಸ ಹಾಗೂ ಸತತ ಪರಿಶ್ರಮದಿಂದ ಉಜ್ವಲ ಭವಿಷ್ಯ ರೂಪಿಸಿಕೊಳ್ಳುವಂತೆ ಲೋಕೇಶ್ ಮಾಥುರ್ ವಿದ್ಯಾರ್ಥಿಗಳಿಗೆ ಹೇಳಿದರು. ಪಟ್ಟಣದ ಕೆ ಎಲ್ ಎಸ್ ವಿ ಡಿ ಐ ಟಿ ಹಳಿಯಾಳದಲ್ಲಿ ಸಪ್ಟೆಂಬರ್ 26ರಂದು ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಮಾರ್ಗದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಸಂಪನ್ಮೂಲ ವ್ಯಕ್ತಿಯಾಗಿ ಈ ಕಾರ್ಯಕ್ರಮಕ್ಕೆ ಝೆಡ್ ಸ್ಕಿಲ್ ಅಪ್ ಸಂಸ್ಥೆಯ ಸಂಸ್ಥಾಪಕ ಲೋಕೇಶ್ ಮಾತುರ್ ಆಗಮಿಸಿದ್ದರು. ವಿದ್ಯಾರ್ಥಿಗಳು ಶಿಸ್ತು ಬದ್ಧ ಜೀವನವನ್ನು ರೂಪಿಸಿಕೊಳ್ಳುವುದು ಅತ್ಯಗತ್ಯವಾಗಿದ್ದು, ಪರಿಶ್ರಮ ಮನೋಭಾವದಿಂದ ಗುರಿ ಸಾಧಿಸಬೇಕೆಂದು ಹೇಳಿದರು. ತಮ್ಮ ಸಾಮರ್ಥ್ಯದ ಮೇಲೆ ನಂಬಿಕೆ ಇಟ್ಟು, ಗುರಿ ಸಾಧನೆಗೆ ಅಗತ್ಯವಿರುವ ಕೌಶಲ್ಯಗಳನ್ನು ಹೊಂದಬೇಕೆಂದು. ಉತ್ತಮ ಭವಿಷ್ಯ ರೂಪಿಸಲು ಸಹಕಾರಿಯಾಗಿರುವ ತಂದೆ ತಾಯಿಯರನ್ನು ಕಡೆಗಾಣಿಸದಂತೆ ಕಿವಿಮಾತು ಹೇಳಿದರು. ಕೇವಲ ಯಶಸ್ಸಿನ ಕನಸು ಕಾಣುವುದು ಬಿಟ್ಟು, ಕಾರ್ಯ ಸಾಧನೆಗೆ ಸಿದ್ಧತೆ ಮಾಡಿಕೊಳ್ಳಬೇಕೆಂದು ಹೇಳಿದರು.

ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ಸಂಚಾಲಕ ಪ್ರೊ, ಸುಧೀರ್ ಕುಲಕರ್ಣಿ ನಿರೂಪಿಸಿದರು. ಪ್ರೊ, ನವೀನ್ ಹಿರೇಮಠ ಸಂಯೋಜಿಸಿದ್ದರು. ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ವತಿಯಿಂದ ಆಯೋಜಿಸಲಾಗಿದ್ದ ಈ ಕಾರ್ಯಕ್ರಮದಲ್ಲಿ 180ಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರೆಂದು ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


Powered By KHUSHIHOST ® | License - ePaperCloud.com